**ಕರ್ನಾಟಕ ಸರ್ಕಾರ**

ಸಂಖ್ಯೆ: ಇಎನ್ 6906 ಸ್ವೀಮರ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 8.9.2009.

M. D.
-9 SEP 2009
KPTCL

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಇಂಧನ ಇಲಾಖೆ,
ಬೆಂಗಳೂರು-1.

ಮಾನವ ಹಕ್ಕು

ಇವರಿಗೆ:

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ: 82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಕೆ. ಜಿ. ರಸ್ತೆ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಚೇರಿ, ಕೆ.ಆರ್. ವೃತ್ತ, ಬೆಂಗಳೂರು-1.
4. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ನವನಗರ, ಹುಬ್ಬಳ್ಳಿ-580 025.
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ಸ್ಟೇಷನ್ ರಸ್ತೆ, ಪರಿವಾರ್ ಹೋಟೆಲ್ ಎದುರುಗಡೆ, ಗುಲ್ಬರ್ಗಾ-585 102.
6. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ಅಂಚೆ ಪೆಟ್ಟಿಗೆ ಸಂಖ್ಯೆ : 200, ಪ್ಯಾರಾಡಿಂ ಪ್ಲಾಜಾ, ಎ. ಬಿ. ಶೆಟ್ಟಿ ವೃತ್ತ, ಮಂಗಳೂರು-575 001.
7. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಕಾರ್ಪೊರೇಟ್ ಕಛೇರಿ, ನಂ: 927, ಎಲ್.ಜೆ. ಅವಿನ್ಯು ಕಮರ್ಷಿಯಲ್ ಕಾಂಪ್ಲೆಕ್ಸ್, ನ್ಯೂ ಕಾಂತರಾಜ್ ಅರಸ್ ರಸ್ತೆ, ಸರಸ್ವತಿಪುರಂ, ಮೈಸೂರು-570 009.
8. ಕಾರ್ಯದರ್ಶಿ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, ಎಂ.ಜಿ. ರಸ್ತೆ, ಬೆಂಗಳೂರು-1.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ: 19, ಕ್ವೀನ್ಸ್ ರಸ್ತೆ, ಬೆಂಗಳೂರು-52.
10. ವ್ಯವಸ್ಥಾಪಕ ನಿರ್ದೇಶಕರು, ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಕಾವೇರಿ ಭವನ, ಬೆಂಗಳೂರು-9.
11. ಮುಖ್ಯ ವಿದ್ಯುತ್ ಪರಿವೀಕ್ಷಕರು, ಮೈಶುಗರ್ ಕಟ್ಟಡ, ನೆಲ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು-2.

Dir. (Admn)

ಮಾನ್ಯರೆ,

ವಿಷಯ: ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಪ್ರಕರಣಗಳಲ್ಲಿ ವರದಿ ಸಲ್ಲಿಸುವ ಬಗ್ಗೆ.

* * *

DGM

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮುಖ್ಯ ಕಾರ್ಯದರ್ಶಿಯವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ : ಲಾ 60 ಹೆಚ್‌ಆರ್‌ಸಿ 2008 ದಿನಾಂಕ : 14.7.2009 ರ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ ಮಾಹಿತಿ ಮತ್ತು ಸೂಕ್ತ ಕ್ರಮಕ್ಕೆ ತಮಗೆ ಕಳುಹಿಸಲು ನಾನು ನಿರ್ದೇಶಿತನಾಗಿದ್ದೇನೆ.

AGM (PR)

ತಮ್ಮ ನಂಬುಗೆಯ,

(ಎಸ್.ಜೆ. ಸಂಪತ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

SEE (IT & MIS)

Submitted to
The Director (A&HR)
IT or MIS sec. does not deal with Human rights affairs

8/9

3717

16/9/09 (SEE IT & MIS)

ಮುಖ್ಯ ಕಾರ್ಯದರ್ಶಿಯವರ ಕಛೇರಿ

# CHIEF SECRETARY'S OFFICE

ಸಂಖ್ಯೆ: ಲಾ 60 ಹೆಚ್‌ಆರ್‌ಸಿ 2008 ~~/2009~~ 14/7/2009

<u>ಸುತ್ತೋಲೆ</u>

ವಿಷಯ: ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಪ್ರಕರಣಗಳಲ್ಲಿ ವರದಿ ಸಲ್ಲಿಸುವ ಕುರಿತು

ಉಲ್ಲೇಖ: 1) ಸುತ್ತೋಲೆ ಸಂಖ್ಯೆ ಲಾ 60 ಹೆಚ್‌ಆರ್‌ಸಿ 2008 ದಿನಾಂಕ 9/4/2009
2) ಸುತ್ತೋಲೆ ಸಂಖ್ಯೆ ಲಾ 32 ಎಲ್‌ಎಎಂ 2009 ದಿನಾಂಕ 9/4/2009

---

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆಗೆ ಸಂಬಂಧಿಸಿದಂತೆ ದೂರುಗಳು ಸ್ವೀಕೃತವಾದಾಗ, ಆ ಬಗ್ಗೆ ಕಾಲಮಿತಿಯೊಳಗೆ ತನಿಖೆ ನಡೆಸಿ ವರದಿಯನ್ನು ಸಲ್ಲಿಸುವ ಕುರಿತಾಗಿ ಹೊರಡಿಸಿರುವ ಸುತ್ತೋಲೆ ಸಂಖ್ಯೆ ಲಾ 60 ಹೆಚ್‌ಆರ್‌ಸಿ 2008 ದಿನಾಂಕ 9/4/2009 ಹಾಗೂ ಸರ್ಕಾರಿ ಕಾನೂನು ವ್ಯವಹರಣೆಗಳನ್ನು ನಡೆಸುವ ಅಧಿಕಾರಿಗಳಿಗೆ ನೀಡಲಾದ ನಿರ್ದೇಶನಗಳ ಕುರಿತಾಗಿ ಹೊರಡಿಸಿರುವ ಸುತ್ತೋಲೆ ಸಂಖ್ಯೆ ಲಾ 32 ಎಲ್‌ಎಎಂ 2009 ದಿನಾಂಕ 9/4/2009 ರೆಡೆಗೆ ತಮ್ಮ ಗಮನವನ್ನು ಸೆಳೆಯಲಾಗಿದೆ.

ವರದಿಗಳನ್ನು ಯಾರಿಂದ ಕೋರಲಾಗಿದೆಯೋ, ಅಂತಹ ಅಧಿಕಾರಿಗಳೇ ಆಯೋಗಕ್ಕೆ ವರದಿಗಳನ್ನು ಸಲ್ಲಿಸಬೇಕೆಂದು ಹಲವಾರು ಪ್ರಕರಣಗಳಲ್ಲಿ ಆಯೋಗವು ಈ ಕೆಳಕಂಡಂತೆ ನಿರ್ದೇಶನಗಳನ್ನು ನೀಡುತ್ತಾ ಬಂದಿದೆ.

"In any proceeding of the Commission, if a named officer or authority is directed to send report or conduct investigation or enquiry, such officer or authority alone should send report or investigate/conduct enquiry, but, the experience of the Commission would show that quite often bypassing the named officers or authorities, the

K. JAIRAJ
Principal Secretary to ...
EST. T/E/I 6906
Dated 21/8/09

officers or authorities subordinate to such named officers or authorities directly send reports to the Commission. This practice is already deprecated by the Commission, and the Chief Secretary to the Government of Karnataka was directed to inform all the concerned that only the named officers and authorities should send report or conduct enquiry into the matter… … The Commission disapproves this practice. There are many reasons why the Commission insists that only the named officer or authority should send report."

ಹಲವಾರು ಇಲಾಖೆಗಳು ಆಯೋಗದ ಸದರಿ ನಿರ್ದೇಶನಗಳನ್ನು ಪಾಲಿಸುತ್ತಿಲ್ಲವೆಂದು ಅಸಮಧಾನವನ್ನು ವ್ಯಕ್ತಪಡಿಸುತ್ತಿದೆ. ಆದುದರಿಂದ, ಆಯೋಗದ ನಿರ್ದೇಶನಗಳನ್ನು ಚಾಚುತಪ್ಪದೆ ಕಟ್ಟುನಿಟ್ಟಾಗಿ ಪರಿಪಾಲಿಸುವಂತೆ ಸೂಚಿಸಲಾಗಿದೆ. ಅಲ್ಲದೆ, ಇಂತಹ ಪ್ರಕರಣಗಳು ಮರುಕಳುಸಿದಂತೆ ಜಾಗರೂಕರಾಗಿರಲು ಸಹ ತಿಳಿಸಲಾಗಿದೆ.

(ಸುಧಾಕರ್ ರಾವ್)
ಮುಖ್ಯ ಕಾರ್ಯದರ್ಶಿ
[illegible]

ಇವರಿಗೆ:

1) ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು
2) ಸರ್ಕಾರದ ಎಲ್ಲಾ ಇಲಾಖಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
3) ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು
4) ಪೋಲೀಸ್ ಮಹಾ ನಿರ್ದೇಶಕರು, ನೃಪತುಂಗ ರಸ್ತೆ, ಬೆಂಗಳೂರು
5) ಇಲಾಖಾ ಮುಖ್ಯಸ್ಥರು
6) ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರದ ಸಚಿವಾಲಯ
7) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು/ ಎಲ್ಲಾ ಜಿಲ್ಲಾಧಿಕಾರಿಗಳು
8) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು
9) ಎಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳೂ
10) ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು

# ಕರ್ನಾಟಕ ಸರ್ಕಾರ

ಸಂಖ್ಯೆ: ಇಎನ್ 6334 ಸ್ವೀಮರ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 10.8.2009.

M. D.
14 AUG 2009
MD KPTCL

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಇಂಧನ ಇಲಾಖೆ,
ಬೆಂಗಳೂರು-1.

ಇವರಿಗೆ:

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ : 82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಕೆ. ಜಿ. ರಸ್ತೆ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಚೇರಿ, ಕೆ.ಆರ್. ವೃತ್ತ, ಬೆಂಗಳೂರು-1.
4. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ನವನಗರ, ಹುಬ್ಬಳ್ಳಿ-580 025.
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ಸ್ಟೇಷನ್ ರಸ್ತೆ, ಪರಿವಾರ್ ಹೋಟೆಲ್ ಎದುರುಗಡೆ, ಗುಲ್ಬರ್ಗಾ-585 102.
6. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ಅಂಚೆ ಪೆಟ್ಟಿಗೆ ಸಂಖ್ಯೆ : 200, ಪ್ಯಾರಾಡಿಂ ಪ್ಲಾಜಾ, ಎ. ಬಿ. ಶೆಟ್ಟಿ ವೃತ್ತ, ಮಂಗಳೂರು-575 001.
7. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಕಾರ್ಪೊರೇಟ್ ಕಛೇರಿ, ನಂ: 927, ಎಲ್.ಜೆ. ಅವಿನ್ಯು ಕಮರ್ಷಿಯಲ್ ಕಾಂಪ್ಲೆಕ್ಸ್, ನ್ಯೂ ಕಾಂತರಾಜ್ ಅರಸ್ ರಸ್ತೆ, ಸರಸ್ವತಿಪುರಂ, ಮೈಸೂರು-570 009.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ: 19, ಕ್ವೀನ್ಸ್ ರಸ್ತೆ, ಬೆಂಗಳೂರು-52.
9. ವ್ಯವಸ್ಥಾಪಕ ನಿರ್ದೇಶಕರು, ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಕಾವೇರಿ ಭವನ, ಬೆಂಗಳೂರು.
10. ಮುಖ್ಯ ವಿದ್ಯುತ್ ಪರಿವೀಕ್ಷಕರು, ಮೈಶುಗರ್ ಕಟ್ಟಡ, ನೆಲ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು-2.

Dir. (Admn)

ಮಾನ್ಯರೆ,

ವಿಷಯ: 1) ಜಿಲ್ಲಾ ಮಟ್ಟದ ಹಾಗೂ ಉಪ ವಿಭಾಗ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ತಾಲ್ಲೂಕು ಕೇಂದ್ರಗಳಿಗೆ ಸಂದರ್ಶನ ನೀಡುವ ಪೂರ್ವದಲ್ಲಿ ಸಂಬಂಧಪಟ್ಟ ಕ್ಷೇತ್ರದ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಸದಸ್ಯರ ಗಮನಕ್ಕೆ ತರುವ ಬಗ್ಗೆ.

2) ವಿಧಾನ ಪರಿಷತ್ತಿನ ಹಕ್ಕು ಬಾಧ್ಯತಾ ಸಮಿತಿಯ 36ನೇ ವರದಿಯಲ್ಲಿನ ಶಿಫಾರಸ್ಸು- ಸರ್ಕಾರಿ ಸಮಾರಂಭಗಳಿಗೆ ಆಹ್ವಾನಿಸುವುದು, ಶಿಲಾಫಲಕಗಳಲ್ಲಿ ಬರೆಸುವುದು ಮತ್ತು ಶಿಷ್ಟಾಚಾರ ಉಲ್ಲಂಘನೆ ಪ್ರಕರಣಗಳಲ್ಲಿ ಹೊಣೆಗಾರಿಕೆ ಬಗ್ಗೆ.

ಉಲ್ಲೇಖ: 1) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ/28/ಅಸಪ/2009 ದಿನಾಂಕ: 4.7.2009

2) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ/33/ರಾರಾಅ/2009 ದಿನಾಂಕ: 6.7.2009

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖದ (1) & (2) ರ ಸುತ್ತೋಲೆಯ ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ ತಮಗೆ ಕಳುಹಿಸಿಕೊಡಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ಎಸ್.ಜೆ. ಸಂಪತ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

3111

ಸಂಖ್ಯೆ: ಸಿಆಸುಇ 33 ರಾರಾಅ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 06.07.2009.

## ಸುತ್ತೋಲೆ

ವಿಷಯ: ವಿಧಾನ ಪರಿಷತ್ತಿನ ಹಕ್ಕು ಬಾಧ್ಯತಾ ಸಮಿತಿಯ 36ನೇ ವರದಿಯಲ್ಲಿನ ಶಿಫಾರಸ್ಸು - ಸರ್ಕಾರಿ ಸಮಾರಂಭಗಳಿಗೆ ಆಹ್ವಾನಿಸುವುದು, ಶಿಲಾಫಲಕಗಳಲ್ಲಿ ಬರೆಸುವುದು ಮತ್ತು ಶಿಷ್ಟಾಚಾರ ಉಲ್ಲಂಘನೆ ಪ್ರಕರಣಗಳಲ್ಲಿ ಹೊಣೆಗಾರಿಕೆ ಬಗ್ಗೆ.

****

ಸರ್ಕಾರಿ ಸಮಾರಂಭಗಳಲ್ಲಿ ಭಾಗವಹಿಸುವ ಎಲ್ಲಾ ಚುನಾಯಿತ ಪ್ರತಿನಿಧಿಗಳ ಹೆಸರುಗಳನ್ನು ಶಿಲಾನ್ಯಾಸದಲ್ಲಿ ಬರೆಸಬೇಕೆಂದು, ಜಿಲ್ಲಾ ಮಟ್ಟದಲ್ಲಿ ನಡೆಯುವ ಎಲ್ಲಾ ಅಧಿಕೃತ ಸರ್ಕಾರಿ ಕಾರ್ಯಕ್ರಮಗಳಿಗೆ ಆಯಾಯ ಜಿಲ್ಲೆಯಿಂದ ಆಯ್ಕೆಯಾದ ಅಥವಾ ಆಯಾಯ ಜಿಲ್ಲೆಯನ್ನು ಆಯ್ಕೆ ಮಾಡಿಕೊಂಡ ವಿಧಾನ ಪರಿಷತ್ತಿನ ಶಾಸಕರುಗಳನ್ನು ಕಡ್ಡಾಯವಾಗಿ ಆಹ್ವಾನಿಸಬೇಕೆಂದು, ಶಿಷ್ಟಾಚಾರ ಉಲ್ಲಂಘನೆ ಪ್ರಕರಣ ಕುರಿತಂತೆ ಉನ್ನತ ಅಧಿಕಾರಿಗಳ ಮೇಲೆ ಶಿಷ್ಟಾಚಾರ ಉಲ್ಲಂಘನೆ ಹೊಣೆಯನ್ನು ನಿಗದಿಪಡಿಸಬೇಕೆಂದು ಮತ್ತು ಕೇಂದ್ರ ಸರ್ಕಾರ ನೀಡುವ ಅನುದಾನದ ಕಾರ್ಯಕ್ರಮಗಳ ಉದ್ಘಾಟನೆಗೆ ಸ್ಥಳೀಯ ಚುನಾಯಿತ ಪ್ರತಿನಿಧಿಗಳಾದ ವಿಧಾನ ಮಂಡಲದ ಸದಸ್ಯರುಗಳನ್ನು ಆಹ್ವಾನಿಸದೆ ಉದ್ಘಾಟನೆ ಕಾರ್ಯಕ್ರಮಗಳು ನಡೆಯುತ್ತಿದ್ದು, ವಿಧಾನ ಮಂಡಲ ಸದಸ್ಯರುಗಳನ್ನು ಕಡ್ಡಾಯವಾಗಿ ಆಹ್ವಾನಿಸಬೇಕೆಂದು ಸಹ ವಿಧಾನ ಪರಿಷತ್ತಿನ ಹಕ್ಕು ಬಾಧ್ಯತಾ ಸಮಿತಿಯು 36ನೇ ವರದಿಯಲ್ಲಿ ತಿಳಿಸಿರುತ್ತದೆ.

ಈ ಬಗ್ಗೆ ಪರಿಶೀಲಿಸಲಾಗಿದ್ದು, ಈ ಕೆಳಗಿನಂತೆ ಸೂಚನೆಗಳನ್ನು ನೀಡಲಾಗಿದೆ:

- ಸರ್ಕಾರಿ ಸಮಾರಂಭಗಳಲ್ಲಿ ಭಾಗವಹಿಸುವ ಚುನಾಯಿತ ಪ್ರತಿನಿಧಿಗಳ ಹೆಸರುಗಳನ್ನು, ಶಿಲಾಫಲಕಗಳಲ್ಲಿ ಬರೆಸುವಾಗ ರಾಜ್ಯ/ಜಿಲ್ಲಾ/ತಾಲ್ಲೂಕು ಮಟ್ಟ, ಹೀಗೆ ಸಂದರ್ಭಕ್ಕೆ ತಕ್ಕಂತೆ ಶಿಷ್ಟಾಚಾರ ಉಲ್ಲಂಘನೆ ಆಗದಂತೆ ನೋಡಿಕೊಳ್ಳಬೇಕೆಂದು ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ ತಿಳಿಸಲಾಗಿದೆ.

.....2

K. JAIRAJ
Principal Secretary to Government,
Energy Department

27/7

- ಜಿಲ್ಲಾ ಮಟ್ಟದಲ್ಲಿ ನಡೆಯುವ ಸರ್ಕಾರಿ ಕಾರ್ಯಕ್ರಮಗಳಿಗೆ ಆಯಾಯ ಜಿಲ್ಲೆಗಳಿಂದ ಆಯ್ಕೆಯಾದ ಅಥವಾ ಆಯಾ ನೋಡಲ್ ತಾಲ್ಲೂಕನ್ನು ಆಯ್ಕೆ ಮಾಡಿಕೊಂಡ ವಿಧಾನ ಪರಿಷತ್ತಿನ ಶಾಸಕರುಗಳನ್ನು ಶಿಷ್ಟಾಚಾರದನ್ವಯ ಆಹ್ವಾನಿಸಬೇಕು, ಯಾವುದೇ ಪ್ರಕರಣದಲ್ಲಿ ಶಿಷ್ಟಾಚಾರ ಉಲ್ಲಂಘನೆ ಆದಲ್ಲಿ ಆ ಪ್ರಕರಣಕ್ಕೆ ಸಂಬಂಧಿಸಿದಂತೆ ಆಯಾ ಇಲಾಖೆಯ ಮೇಲಧಿಕಾರಿಗಳೇ ಜವಾಬ್ದಾರರಾಗುತ್ತಾರೆ.

- ಕೇಂದ್ರ ಸರ್ಕಾರದ ಸಮಾರಂಭಗಳಿಗೆ ಸಂಸತ್ ಸದಸ್ಯರನ್ನು ಆಹ್ವಾನಿಸುವ ರೀತಿಯಲ್ಲಿಯೇ ಸ್ಥಳೀಯ ಚುನಾಯಿತ ಪ್ರತಿನಿಧಿಗಳಾದ ವಿಧಾನ ಮಂಡಲದ ಸದಸ್ಯರುಗಳನ್ನು ಶಿಷ್ಟಾಚಾರದನ್ವಯ ತಪ್ಪದೇ ಆಹ್ವಾನಿಸಬೇಕೆಂದು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಹಾಗೂ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಈ ಮೂಲಕ ಸೂಚನೆಗಳನ್ನು ನೀಡಲಾಗಿದೆ.

(ಬಿ. ವೀರಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ರಾಜಕೀಯ).

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
3. ಕಾರ್ಯದರ್ಶಿಗಳು, ರಾಜ್ಯ ವಿಧಾನ ಸಭೆ ಸಚಿವಾಲಯ.
4. ಕಾರ್ಯದರ್ಶಿಗಳು, ರಾಜ್ಯ ವಿಧಾನ ಪರಿಷತ್ ಸಚಿವಾಲಯ.
5. ಎಲ್ಲಾ ಪ್ರಾದೇಶಿಕ ಆಯುಕ್ತರು.
6. ಎಲ್ಲಾ ಇಲಾಖಾ ಮುಖ್ಯಸ್ಥರು.
7. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
8. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್

(6–8:) ನಿಮ್ಮ ವ್ಯಾಪ್ತಿಯಡಿ ಬರುವ ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳಿಗೆ ಈ ಸುತ್ತೋಲೆಯನ್ವಯ ಸೂಕ್ತ ನಿರ್ದೇಶನ ನೀಡುವಂತೆ ಕೋರಿದೆ.

# ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 28 ಅಸಪ 2009

ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಮಹಡಿ, 5ನೇ ಹಂತ, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:4/7/2009

## ಸುತ್ತೋಲೆ

**ವಿಷಯ:** ಜಿಲ್ಲಾ ಮಟ್ಟದ ಹಾಗೂ ಉಪ ವಿಭಾಗ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ತಾಲ್ಲೂಕು ಕೇಂದ್ರಗಳಿಗೆ ಸಂದರ್ಶನ ನೀಡುವ ಪೂರ್ವದಲ್ಲಿ ಸಂಬಂಧಪಟ್ಟ ಕ್ಷೇತ್ರದ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಸದಸ್ಯರ ಗಮನಕ್ಕೆ ತರುವ ಬಗ್ಗೆ.

**ಉಲ್ಲೇಖ:** ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ: ಪಿಎಸ್‌ಸಿಎಂ/ 1677/2009 ದಿನಾಂಕ: 23/5/2009.

**********

ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಲು ಮತ್ತು ವಿವಿಧ ಉದ್ದೇಶಗಳಿಗಾಗಿ ಅಧಿಕೃತ ಪ್ರವಾಸ ಮಾಡುವ ಪೂರ್ವದಲ್ಲಿ ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರ ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರ ಗಮನಕ್ಕೆ ತಾರದಿರುವುದರಿಂದ ಜನಪ್ರತಿನಿಧಿಗಳು ತಮ್ಮ ಕ್ಷೇತ್ರದ ಕೆಲಸಕಾರ್ಯಗಳ ಬಗ್ಗೆ ಸಲಹೆ ಸೂಚನೆ ನೀಡಲು ಸಾಧ್ಯವಾಗದಂತಾಗಿದೆ. ಅಲ್ಲದೆ ಕ್ಷೇತ್ರಗಳಲ್ಲಿ ಆಗಬೇಕಾದ ಕೆಲಸ ಕಾರ್ಯಗಳ ಬಗ್ಗೆ ಹಾಗೂ ಕ್ಷೇತ್ರದ ಅಗತ್ಯತೆಗಳ ಕುರಿತು ಸಾರ್ವಜನಿಕರು ಸಂಬಂಧಿಸಿದ ಕ್ಷೇತ್ರದ ಮಾನ್ಯ ಸಂಸದರು ಮತ್ತು ಮಾನ್ಯ ಶಾಸಕರುಗಳ ಗಮನಕ್ಕೆ ತರುವುದರಿಂದ ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಮ್ಮ ಪ್ರವಾಸ ಕಾರ್ಯಕ್ರಮ ಸೂಚಿಯನ್ನು ಪ್ರವಾಸ ಮಾಡುವ ಪೂರ್ವದಲ್ಲೇ ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರುಗಳಿಗೆ ಕಳುಹಿಸಿದರೆ, ಅಧಿಕಾರಿಗಳು ಪ್ರವಾಸ ಮಾಡುವ ದಿನದಂದು ಸನ್ಮಾನ್ಯ ಸದಸ್ಯರುಗಳು ಸಹ ಸದರಿ ಸಭೆಗಳಲ್ಲಿ ಹಾಜರಿದ್ದು, ಪ್ರಗತಿ ಪರಿಶೀಲನೆ ಕೈಗೊಳ್ಳಲು ಅನುಕೂಲವಾಗುವುದು ಹಾಗೂ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲು ಮತ್ತು ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಹಾಯಕವಾಗುತ್ತದೆ.

ಆದುದರಿಂದ ಇನ್ನು ಮುಂದೆ ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಲು ಮತ್ತು ವಿವಿಧ ಉದ್ದೇಶಗಳಿಗಾಗಿ ಅಧಿಕೃತ ಪ್ರವಾಸ ಕೈಗೊಳ್ಳುವ ಅಧಿಕಾರಿಗಳು ಪ್ರವಾಸ ಮಾಡುವ ಪೂರ್ವದಲ್ಲಿ ತಮ್ಮ ಪ್ರವಾಸ ಕಾರ್ಯಕ್ರಮದ ಸೂಚಿಯನ್ನು ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರ ಗಮನಕ್ಕೆ ತಪ್ಪದೇ ತರಬೇಕೆಂದು ಈ ಮೂಲಕ ಸೂಚಿಸಲಾಗಿದೆ.

(ರಂಜಿನಿ ಶ್ರೀಕುಮಾರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಸಿಆಸುಇ (ಆಡಳಿತ ಸುಧಾರಣೆ).

K. JAIRAJ
Principal Secretary to Government
Energy Department

**ಇವರಿಗೆ:**

1) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು/ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು.
2) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
3) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
4) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6) ಎಲ್ಲಾ ಉಪ ವಿಭಾಗಾಧಿಕಾರಿಗಳು.
7) ಎಲ್ಲಾ ತಾಲ್ಲೂಕು ತಹಶೀಲ್ದಾರರು.

**ಪ್ರತಿ ಮಾಹಿತಿಗಾಗಿ:** 1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.

2) ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.